**ಕರ್ನಾಟಕ ಸರ್ಕಾರ**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ/03/ಇಎಸ್ ಟಿ(8)/2025

ಆಯುಕ್ತರ ಕಚೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು 01, ದಿನಾಂಕ:27.06.2025

**ಸುತ್ತೋಲೆ**

**ವಿಷಯ :** 2025 ನೇ ಸಾಲಿನ ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ಕೌನ್ಸೆಲಿಂಗ್ ನಡೆಸುವ ಬಗ್ಗೆ.

**ಉಲ್ಲೇಖ:**

1 ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 137 ಡಿಟಿಇ 2020 ದಿನಾಂಕ: 29-01-2021 ರಂತೆ ಅಧಿಸೂಚಿಸಲಾದ ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ ನಿಯಮಗಳು-2021

2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 137 ಡಿಟಿಇ 2020 ದಿನಾಂಕ: 29-06-2021.

3. ಈ ಕಛೇರಿ ಸುತ್ತೋಲೆ ಸಂಖ್ಯೆ: ಡಿಟಿಇ 17 ಇಎಸ್‌ಟಿ (8) 2024 ದಿ:03-04-2025 ಹಾಗೂ ದಿ:21-04-2025.

4. ಈ ಕಛೇರಿ ಪ್ರಕಟಣೆ ಸಂಖ್ಯೆ: ಡಿಟಿಇ 03 ಇಎಸ್‌ಟಿ (8) 2025 ದಿ:19-05-2025.

5. ಈ ಕಛೇರಿ ಸುತ್ತೋಲೆ ಸಂಖ್ಯೆ: ಡಿಟಿಇ 03 ಇಎಸ್‌ಟಿ (8) 2025 ದಿ:10-06-2025

*****

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ಸಹಾಯಕಪ್ರಾಧ್ಯಾಪಕರು(ಗ್ರೂಪ್-ಎ), ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಬಿ), ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು), ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಬೋಧಕರ 2025ನೇ ಸಾಲಿನ ವರ್ಗಾವಣೆಗಳಿಗೆ ಸಂಬಂಧಿಸಿದಂತೆ ಉಲ್ಲೇಖ (1) ಹಾಗೂ (2) ರ ನಿಯಮಗಳಲ್ಲಿ ನೀಡಿರುವ ಸೂಚನೆಯಂತೆ ಕ್ರಮಕೈಗೊಳ್ಳುವ ಸಲುವಾಗಿ ಉಲ್ಲೇಖ(4) ರ ಪ್ರಕಟಣೆಯಲ್ಲಿ ವರ್ಗಾವಣೆ ಕೌನ್ಸೆಲಿಂಗ್ ತಾತ್ಕಾಲಿಕ ವೇಳಾಪಟ್ಟಿಯನ್ನುಪ್ರಕಟಿಸಲಾಗಿರುತ್ತದೆ. ಗಂಭೀರ ಕಾಯಿಲೆಗಳ ಪ್ರಕರಣಗಳಡಿ ಕೋರಿಕೆ ವರ್ಗಾವಣೆ ಅರ್ಜಿಸಲ್ಲಿಸಿರುವ ಬೋಧಕರ ವೈದ್ಯಕೀಯ ತಪಾಸಣಾ ವರದಿ ಸ್ವೀಕೃತವಾಗದ ಹಿನ್ನಲೆಯಲ್ಲಿ ಪರಿಷ್ಕೃತ ವರ್ಗಾವಣಾ ಕೌನ್ಸೆಲಿಂಗ್ ವೇಳಾಪಟ್ಟಿಯನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದೆಂದು ಉಲ್ಲೇಖ(5) ರ ಸುತ್ತೋಲೆಯಲ್ಲಿ ತಿಳಿಸಲಾಗಿದ್ದು, ಪರಿಷ್ಕೃತ ವರ್ಗಾವಣಾ ಕೌನ್ಸೆಲಿಂಗ್ ವೇಳಾಪಟ್ಟಿಯನ್ನು ಕೆಳಕಂಡಂತೆ ನಿಗದಿಪಡಿಸಲಾಗಿದೆ.

| ಕ್ರ.ಸಂ. | ವಿವರ | ದಿನಾಂಕ |
|---|---|---|
| 1 | ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಮತ್ತು ವಿಶೇಷ ಪ್ರಕರಣಗಳ ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿ ಪ್ರಕಟಣಾ ದಿನಾಂಕ | 01-07-2025 |
| 2 | ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ | 03-07-2025 |
| 3 | ವಿಶೇಷ ಪ್ರಕರಣಗಳ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಅಂತಿಮ ವರ್ಗಾವಣೆ ಆದ್ಯತಾ ಪಟ್ಟಿ ಮತ್ತು . ಕೌನ್ಸೆಲಿಂಗ್ ಮೂಲಕ ಭರ್ತಿ ಮಾಡುವ ಖಾಲಿ ಹುದ್ದೆಗಳ ಪ್ರಕಟಣೆ | 05-07-2025 |
| 4 | ವಿಶೇಷ ಪ್ರಕರಣಗಳ 1st Round ಕೌನ್ಸೆಲಿಂಗ್ (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು. | 08-07-2025 ರಿಂದ ಮುಕ್ತಾಯದವರೆಗೆ |
| 5 | ವಿಶೇಷ ಪ್ರಕರಣಗಳ $2^{nd}$ Round ಕೌನ್ಸೆಲಿಂಗ್ (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು. | |
| 6 | ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಕೌನ್ಸೆಲಿಂಗ್ (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟಿ ಪ್ರಕಟಣೆ ನಂತರ ಪ್ರಕಟಿಸಲಾಗುವುದು. | |

ವರ್ಗಾವಣೆಗೆ ಸಂಬಂಧಿಸಿದ ಮಾಹಿತಿಯನ್ನುಕಾಲಕಾಲಕ್ಕೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ,**

ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1.ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ,ಬೆಂಗಳೂರು- ಮಾಹಿತಿಗಾಗಿ.

2.ಮಾನ್ಯ ಆಯುಕ್ತರ ಅಪ್ತ ಶಾಖೆಗೆ.

3.ಮಾನ್ಯ ನಿರ್ದೇಶಕರ ಅಪ್ತ ಶಾಖೆಗೆ.

4. ಜಂಟಿ ನಿರ್ದೇಶಕರು (ಆಡಳಿತ) ಅಪ್ತ ಶಾಖೆಗೆ.

5.ಇ-ಆಡಳಿತ ವಿಭಾಗಕ್ಕೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.

6.ಕಛೇರಿ ಪ್ರತಿ